ಅ) ಹೌದು.

ಆ) ಬಸ್ ಶೆಲ್ಟರ್‌ಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

976(1559) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ(ಪರಸಗಡ) : ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕಳಸಾ–ಬಂದೂರಿ ನದಿಗಳನ್ನು ಮಲಪ್ರಭಾಗೆ ಜೋಡಣೆ ಮಾಡುವ ಯೋಜನೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದಲ್ಲಿ, ಸರ್ಕಾರದ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು) :

ಅ) ಬಂದಿದೆ.

ಆ) ರಾಜ್ಯದ ಪ್ರಯತ್ನಗಳಂತೆ ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳ ಕುಡಿಯುವ ನೀರಿನ ಕೊರತೆಯನ್ನು ನೀಗಿಸಲು ಕೇಂದ್ರ ಸರ್ಕಾರವು ದಿನಾಂಕ : 30.4.2002 ರಂದು ಮಹದಾಯಿ ಕಣಿವೆಯಿಂದ 7.56 ಟಿಎಂಸಿ ನೀರನ್ನು ಮಲಪ್ರಭಾ ನದಿಗೆ ವರ್ಗಾಯಿಸಲು ಕೆಲವು ಷರತ್ತುಗಳೊಂದಿಗೆ ತಾತ್ವಿಕ ಅನುಮೋದನೆಯನ್ನು ನೀಡಿತ್ತು. ಗೋವಾ ರಾಜ್ಯದ ಪ್ರತಿಭಟನೆಯ ಕಾರಣ ದಿನಾಂಕ:19.9.2002ರಂದು ಈ ಅನುಮೋದನೆಯನ್ನು ಕೇಂದ್ರ ಸರ್ಕಾರವು ತಡೆಹಿಡಿದಿರುತ್ತದೆ.

ಗೋವಾ ರಾಜ್ಯವು ಮಹಾದಾಯಿ ನದಿ ವಿವಾದ ಮಂಡಳಿಯ ರಚನೆ ಕುರಿತು ಕೇಂದ್ರ ಸರ್ಕಾರಕ್ಕೆ ಮಾಡಿದ್ದ ಮನವಿಯ ಬಗ್ಗೆ ಮತ್ತು ಅಂತರ ರಾಜ್ಯ ವಿಷಯಗಳಂತೆ ಸಂಬಂಧಿಸಿದ ರಾಜ್ಯಗಳೊಂದಿಗೆ ಚರ್ಚಿಸಿ ನಿರ್ಧಾರಕ್ಕೆ ಬರಲು ದಿನಾಂಕ:20.12.02ರಂದು ಕೇಂದ್ರ ಸರ್ಕಾರದ ಮಾನ್ಯ ಜಲ ಸಂಪನ್ಮೂಲ ಸಚಿವರು ನವದೆಹಲಿಯಲ್ಲಿ ಸಭೆಯನ್ನು ಜರುಗಿಸಿರುತ್ತಾರೆ. ಈ ಸಭೆಯಲ್ಲಿ ಮಹಾದಾಯಿ ಕಣಿವೆಯಲ್ಲಿ ದೊರಕುವ ಒಟ್ಟು ನೀರಿನ ಪ್ರಮಾಣದ ಬಗ್ಗೆ ಕೇಂದ್ರ ಜಲ ಆಯೋಗದಿಂದ ಯೀಲ್ಡ್ ಸೀರೀಸ್ ಅಧ್ಯಯನವನ್ನು (Yield Series Studies) ಮಾರ್ಚ್ 2003 ರೊಳಗೆ ಪೂರ್ಣಗೊಳಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ ರಾಜ್ಯ ಸರ್ಕಾರದ ಅಧಿಕಾರಿಗಳು ನವದೆಹಲಿಯ ಕೇಂದ್ರ ಜಲ ಆಯೋಗ ಕಚೇರಿಗೆ ಹೋಗಿ ಸದರಿ ಅಧ್ಯಯನದಲ್ಲಿ ಭಾಗವಹಿಸಿ ಬಂದಿರುತ್ತಾರೆ. ಅಧ್ಯಯನ ಕಾರ್ಯವು ಪೂರ್ಣಗೊಂಡಿರುವುದಾಗಿ ತಿಳಿದು ಬಂದಿದ್ದು ಮುಂದಿನ ನಿರ್ದೇಶನವನ್ನು ಕೇಂದ್ರ ಸರ್ಕಾರದಿಂದ ನಿರೀಕ್ಷಿಸಲಾಗಿದೆ.

ಅಕ್ಟೋಬರ್ 2002ರಿಂದ ನವೆಂಬರ್ 2004ರವರೆಗೆ ಮಾನ್ಯ ಮುಖ್ಯಮಂತ್ರಿಗಳು, ಜಲ ಸಂಪನ್ಮೂಲ ಸಚಿವರು ಮತ್ತು ಜಲ ಸಂಪನ್ಮೂಲ ಇಲಾಖೆಯ ಕಾರ್ಯದರ್ಶಿಗಳಿಂದ ಕೇಂದ್ರ ಸರ್ಕಾರಕ್ಕೆ ಪತ್ರಗಳನ್ನು ಬರೆದು ದಿನಾಂಕ : 19.9.02ರ ತಡೆ ಆದೇಶವನ್ನು ಹಿಂತೆಗೆದುಕೊಳ್ಳುವಂತೆ ಆಗ್ರಹ ಪಡಿಸಲಾಗಿದೆ. ಗೋವಾ, ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ಚರ್ಚಿಸಿ ತೀರ್ಮಾನಕ್ಕೆ ಬರಲು ದಿ:3–01–05 ರಂದು ನವದೆಹಲಿಯಲ್ಲಿ ಕರೆಯಲಾಗಿದ್ದ ಸಭೆಯನ್ನು ಕಾರಣಾಂತರಗಳಿಂದ ದಿ:15–02–05ಕ್ಕೆ ಮುಂದೂಡಲಾಗಿರುತ್ತದೆ.